ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ

ಸಿ.ಸಿ. ಸಂಖ್ಯೆಃ **462/2024**

ಪಿರ್ಯಾದಿ **:** ರಾಜ್ಯ, ಪರವಾಗಿ ಬಣಕಲ್ ಪೊಲೀಸ್ ಠಾಣೆ,

ವಿರುದ್ಧ

ಆರೋಪಿ **:** ಚಂದು.ಎ.ಎನ್, ವಯಸ್ಸು 24 ವರ್ಷ,
ಬಿನ್ ನಾಗರಾಜಪ್ಪ, ವಾಸಃ ಹಳಪೆ ಕೆಂಬಾರ ರಸ್ತೆ,
ಪಂಪ್‌ವೆಲ್, ಮಂಗಳೂರು.

ಸ್ವಂತ ವಿಳಾಸಃ ಭಾಗಶೆಟ್ಟಿ ಹಳ್ಳಿ ಗ್ರಾಮ,
ಚೌಳಹಿರಿಯೂರು ಹೋಬಳಿ,
ಕಡೂರು ತಾಲ್ಲೂಕು,
ಚಿಕ್ಕಮಗಳೂರು ಜಿಲ್ಲೆ.

ದೋಷಾರೋಪಣೆ

ಶ್ರೀ. ವಿಶ್ವನಾಥ್ ಎ., **C/c** ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆಗಳು ಏನೆಂದರೆಃ-

**1.** ದಿನಾಂಕಃ 02.11.2023 ರಂದು ಬೆಳಗ್ಗೆ 10.55 ರ ಸಮಯದಲ್ಲಿ ಬಣಕಲ್ ಪೊಲೀಸ್ ಠಾಣಾ ವ್ಯಾಪ್ತಿಯ ತರುವೆ ಗ್ರಾಮದ ವಿವ್ಯೂ ಪಾಯಿಂಟ್ ನ ಹತ್ತಿರ ಚಾರ್ಮಾಡಿ ಘಾಟಿಯ ಎನ್.ಹೆಚ್-73 ರ ರಸ್ತೆಯಲ್ಲಿ ಉಡುಪಿಯಿಂದ ಚಿಕ್ಕಮಗಳೂರಿಗೆ ಹೋಗಲು ಕೆಎ-19-ಎಫ್-3360 ನೇ ನೋಂದಣಿ ಸಂಖ್ಯೆಯ ಕೆ.ಎಸ್.ಆರ್.ಟಿ.ಸಿ ಬಸ್ ನಲ್ಲಿ ಚಾಸಾ1 ರವರು ಬಸ್ ಕಂಡಕ್ಟರ್ ಆಗಿ ಹಾಗೂ ಚಾಸಾ2 ರವರ ಸದರಿ ಬಸ್ ಅನ್ನು ಚಾಲನೆ ಮಾಡಿಕೊಂಡು ಹೋಗುತ್ತಿರುವಾಗ, ಎದುರುಗಡೆಯಿಂದ ಅಂದರೆ ಕೊಟ್ಟಿಗೆಹಾರದ ಕಡೆಯಿಂದ ಬಂದಂತಹ ಆರೋಪಿಯಾದ ನೀವು ನಿಮ್ಮ ವಾಹನ ನೋಂದಣಿ ಸಂಖ್ಯೆ ಕೆಎ-18-ಇಕೆ-1536 ನೇ ಹೋಂಡಾ ಕಂಪನಿಯ ಗ್ರೇ ಕಲರ್ ನ ಡಿಯೋ ಡ್ರಮ್ ಸ್ಕೂಟರ್ ಅನ್ನು ಬಸ್ ನ ಕಡೆ ನಿರ್ಲಕ್ಷತನದಿಂದ ಚಾಲನೆ ಮಾಡಿಕೊಂಡು ಬಂದಿದ್ದು, ಆಗ ಚಾಸಾ2 ರವರು ಬಸ್ ಅನ್ನು ರಸ್ತೆಯ ಎಡಕ್ಕೆ ತಿರುಗಿಸಿದ್ದು, ನಂತರ ಆರೋಪಿಯಾದ ನೀವು ಸ್ಕೂಟರ್ ಅನ್ನು ಚಾಲನೆ ಮಾಡಿಕೊಂಡು ಮುಂದೆ ಹೋಗಿದ್ದು, ಚಾಸಾ2 ರವರು ಬಸ್ ಚಾಲನೆ ಮಾಡಿಕೊಂಡು ಸ್ವಲ್ಪ ಮುಂದಕ್ಕೆ ಬಂದಾಗ ಆರೋಪಿಯಾದ ನೀವು ಚಾಸಾ2 ರವರ ಚಾಲನೆ ಮಾಡುತ್ತಿದ್ದ ಬಸ್ ಅನ್ನು ಹಿಂಬಾಲಿಸಿಕೊಂಡು ಬಂದು ಹಾರನ್ ಹೊಡೆದು, ಸದರಿ ಬಸ್ ಅನ್ನು ಮುಂದಕ್ಕೆ ಹೋಗದಂತೆ ಅಡ್ಡಗಟ್ಟಿರುತ್ತೀರಿ. ಈ ರೀತ್ಯಾ

ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **341** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

**2**. ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಮುಂದುವರೆದು, ಚಾಸಾ2 ರವರಿಗೆ ಸರಿಯಾಗಿ ಬಸ್ ಅನ್ನು ಓಡಿಸಲು ನಿನಗೆ ಬರುವುದಿಲ್ಲವೇ ಸೂಳೇಮಗನೇ, ಬೋಳಿಮಗನೇ ಎಂದು ಅವಾಚ್ಯ ಶಬ್ದಗಳಿಂದ ಬೈದಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **504** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

**3**. ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಮುಂದುವರೆದು, ನಿಮ್ಮ ಕೈಯಲ್ಲಿದ್ದ ಹೆಲ್ಮೆಟ್ ನಿಂದ ಚಾಸಾ1 ರವರ ಮುಖಕ್ಕೆ ಮತ್ತು ಮೂಗಿಗೆ ಹೊಡೆದು ಸಾಮಾನ್ಯ ಸ್ವರೂಪದ ಗಾಯಪಡಿಸಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **324** ಸಹವಾಚಕ ಕಲಂ **34** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

**4**. ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಮುಂದುವರೆದು, ನಿಮ್ಮ ಕೈಯಿಂದ ಚಾಸಾ1 ರವರ ಕೆನ್ನೆಗೆ ಹೊಡೆದು ನೋವುಂಟು ಮಾಡಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **323** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

**5**. ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಮುಂದುವರೆದು, ಸಾರ್ವಜನಿಕ ನೌಕರರಾದ ಚಾಸಾ1 ಮತ್ತು 2 ರವರಿಗೆ ಬೈದು, ಚಾಸಾ1 ರವರ ಶರ್ಟ್ ಅನ್ನು ಹಿಡಿದು ಎಳೆದಾಡಿ ಅವರ ಕರ್ತವ್ಯಕ್ಕೆ ಅಡ್ಡಿಪಡಿಸಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **332** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

**6**. ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಮುಂದುವರೆದು, ಸಾರ್ವಜನಿಕ ರಸ್ತೆಯಲ್ಲಿ ಸಾರ್ವಜನಿಕರಿಗೆ ಅಶ್ಲೀಲವಾಗಿ ದೇಹದ ಗೌಪ್ಯ ಅಂಗಗಳನ್ನು ತೋರಿಸಿ ಮುಜುಗರ ಮತ್ತು ಕಿರುಕುಳ ಉಂಟು ಮಾಡಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **353** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

ಸದರಿ ಮೇಲ್ಕಂಡ ಆರೋಪಗಳನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಮಾಡಿದ್ದರಿಂದ, ಅವುಗಳು ಈ ನ್ಯಾಯಾಲಯದಿಂದ ವಿಚಾರಣೆಯಾಗತಕ್ಕದೆಂದು ಆದೇಶಿಸಲಾಗಿದೆ.

ಪ್ರಃ 1. ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದ್ದೀರಾ? ಅವುಗಳು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರಃ

ಪ್ರಃ 2. ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರಃ

(ಆರೋಪಿತರಿಗೆ ದಿನಾಂಕ 16.07.2024 ರಂದು ದೋಷಾರೋಪಣೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ)

**Sd/-**

ಮೂಡಿಗೆರೆ
ದಿನಾಂಕಃ 16.07.2024

**C/c** ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ.